# ಕರ್ನಾಟಕಸರ್ಕಾರದನಡವಳಿಗಳು

**ವಿಷಯ:** 2024-25ನೇ ಸಾಲಿಗೆ Innovative Projects ಅಡಿಯಲ್ಲಿ ಬಾಲ್ಯ ವಿವಾಹ ಮುಕ್ತ ಗ್ರಾಮಪಂಚಾಯ್ತಿಗಳನ್ನು ಗುರುತಿಸಿ ಪ್ರಶಸ್ತಿ ನೀಡುವಕುರಿತು.

**ಓದಲಾಗಿದೆ:** ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಇವರ ಏಕ ಕಡತ ಸಂಖ್ಯೆ:DCP/IEC/GEN/6/2024-PM-IEC-TR, ದಿನಾಂಕ: 19.12.2024.

*****

**ಪ್ರಸ್ತಾವನೆ:**

ಮೇಲೆ ಓದಲಾದ ಏಕ ಕಡತದಲ್ಲಿ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಇವರು 2024-25ನೇ ಸಾಲಿಗೆ Innovative Projects ಅಡಿಯಲ್ಲಿ ಬಾಲ್ಯವಿವಾಹಕ್ಕೆ, ಸಂಬಂಧಿಸಿದಂತೆ ಶೂನ್ಯ ಸಹಿಷ್ಣುತೆ ಹೊಂದಿರುವ, ಬಾಲ್ಯವಿವಾಹ ಮುಕ್ತ ಗ್ರಾಮಪಂಚಾಯ್ತಿಗಳನ್ನು ಗುರುತಿಸಿ ಪ್ರಶಸ್ತಿ ನೀಡುವ ಕುರಿತು ಹಾಗೂ ಮಕ್ಕಳ ರಕ್ಷಣೆಯಲ್ಲಿ ನಿರತ, ಅತ್ಯುತ್ತಮವಾಗಿ ಸೇವೆಸಲ್ಲಿಸುತ್ತಿರುವ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ, ಸಿಬ್ಬಂದಿಗಳನ್ನು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸಿ, ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.

ಅದರಂತೆ, ದಿನಾಂಕ 05/07/24ರಂದು ನಡೆದ 2024-25ನೇ ಸಾಲಿನ Project Approval Board ಸಭೆಯಲ್ಲಿ ಸದರಿ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿ ಮಂಜೂರಾತಿ ನೀಡಲಾಗಿರುತ್ತದೆ. ಒಂದು ಗ್ರಾಮಪಂಚಾಯತಿಗೆ ರೂ.50 ಸಾವಿರದಂತೆ, 50 ಗ್ರಾಮಪಂಚಾಯತಿಗಳಿಗೆ ರೂ. 25.00ಲಕ್ಷಗಳ ಪ್ರೋತ್ಸಾಹಧನದ ಪ್ರಸ್ತಾವನೆಗೆ ಮಂಜೂರಾತಿ ನೀಡಿರುತ್ತದೆ. ಮಕ್ಕಳ ರಕ್ಷಣಾ ನಿರ್ದೇಶನಾಲಯದಡಿಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಒಬ್ಬರು ಅಧಿಕಾರಿ/ಸಿಬ್ಬಂದಿಗೆ ರೂ.25,000/-ರಂತೆ ಒಟ್ಟು 20 ಅಧಿಕಾರಿ/ಸಿಬ್ಬಂದಿಗಳಿಗೆ ರೂ.5.00 ಲಕ್ಷಗಳ ಪ್ರಶಸ್ತಿಯ ಪ್ರಸ್ತಾವನೆಗೆ ಮಂಜೂರಾತಿ ನೀಡಲಾಗಿದೆ. ಮಿಷನ್ ವಾತ್ಸಲ್ಯ ಮಾರ್ಗಸೂಚಿಯಂತೆ ರಾಜ್ಯ ಮಕ್ಕಳ ರಕ್ಷಣಾ ಸೊಸೈಟಿಗೆ ನೀಡಿರುವ ಆರ್ಥಿಕ ಬೆಂಬಲದಲ್ಲಿನ ನವೀನ ಚಟುವಟಿಕೆಗಳನ್ನು ಕೈಗೊಳ್ಳಲು ವಾರ್ಷಿಕ ರೂ 50.00 ಲಕ್ಷ ಅನುದಾನವನ್ನು ನಿಗಧಿಪಡಿಸಲಾಗಿರುತ್ತದೆ. ಕೇಂದ್ರ ಸರ್ಕಾರದಿಂದ ಅನುಮೋದನೆಯಾಗಿರುವ 2 ನವನವೀನ ಕಾರ್ಯಕ್ರಮಗಳಿಗೆ ತಗಲುವ ಒಟ್ಟು 30.00 ಲಕ್ಷ ರೂಗಳನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕ್ರಮವಾಗಿ 60:40ರ ಅನುಪಾತದಲ್ಲಿ ಭರಿಸಬೇಕಾಗಿರುತ್ತದೆ. ನವನವೀನ ಚಟುವಟಿಕೆಗಳಿಗೆ ನಿಗಧಿಪಡಿಸಲಾಗಿರುವ ರೂ 50.00ಲಕ್ಷಗಳಲ್ಲಿ ಮೇಲೆ ತಿಳಿಸಿದ 2 ಕಾರ್ಯಕ್ರಮಗಳಿಗೆ ತಗಲುವ ರೂ 30.00 ಲಕ್ಷಗಳನ್ನು ಹೊರತುಪಡಿಸಿ ಇನ್ನೂ 20.00ಲಕ್ಷಗಳು ನವನವೀನ ಕಾರ್ಯಕ್ರಮದಡಿ ಉಳಿಕೆ ಇರುತ್ತದೆ. ಲೆಕ್ಕ ಶೀರ್ಷಿಕೆ:2235-02-102-0-48 ಉಪ ಲೆಕ್ಕಶೀರ್ಷಿಕೆ:103ರಡಿ ಕೇಂದ್ರದ ಪಾಲು 60% ಹಾಗೂ 2235-02-102-0-49 ರಡಿಯಲ್ಲಿ ರಾಜ್ಯದ ಪಾಲು 40% ರಂತೆ ವೆಚ್ಚವನ್ನು ಭರಿಸುವಂತೆ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಮಮಇ 198 ಮಭಾಬ 2024, ಬೆಂಗಳೂರು,**

**ದಿನಾಂಕ:06.01.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿಗೆ Innovative Projects ಅಡಿಯಲ್ಲಿ ಬಾಲ್ಯವಿವಾಹಕ್ಕೆ ಸಂಬಂಧಿಸಿದಂತೆ ಶೂನ್ಯ ಸಹಿಷ್ಣುತೆ ಹೊಂದಿರುವ "ಬಾಲ್ಯವಿವಾಹ ಮುಕ್ತ ಗ್ರಾಮಪಂಚಾಯತ್" ಗಳನ್ನು ಗುರುತಿಸಿ, ಒಂದು ಗ್ರಾಮ ಪಂಚಾಯತಿಗೆ ಪ್ರಶಸ್ತಿ ಮೊತ್ತ ರೂ.25,000/- (ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಗಳಂತೆ ನೀಡಲು ಸಹಮತಿ ನೀಡಿ ಆದೇಶಿಸಿದೆ.

...2

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಹಾಗೂ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

RLatha 6/1/25

**(ಆರ್. ಲತಾ)**
ಸರ್ಕಾರದ ಅಧೀನ ಕಾರ್ಯದರ್ಶಿ-3
ಮಹಿಳಾ ಮತ್ತು ಮಕ್ಕಳ ಅಭಿವದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560 001.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ , ಬೆಂಗಳೂರು.
4. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
5. ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನ ಸೌಧ, ಬೆಂಗಳೂರು.
8. ಉಪ ನಿರ್ದೇಶಕರು, ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.

**ಪ್ರತಿ:**

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

*****